Akashvani : Bangalore
Regional Bulletin In Kannada
01.07.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
01.07.2024 / 14.30 hrs

<u>ಮುಖ್ಯಾಂಶಗಳು</u>

- ಸುಳ್ಳು ಸುದ್ದಿಗಳು ಸಮಾಜಕ್ಕೆ ಅಪಾಯಕಾರಿ- ಮುಖ್ಯಮಂತ್ರಿ ಸಿದ್ದರಾಮಯ್ಯ
- ರಾಜ್ಯದಲ್ಲಿ ಇಂದಿನಿಂದ ದೂರುಗಳೆಲ್ಲಾ ಹೊಸ ಅಪರಾಧ ಕಾನೂನಿನಡಿ ದಾಖಲು- ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಗ್ರಾಮಪಂಚಾಯಿತಿಗಳಲ್ಲಿ ಆರಂಭವಾದ ಜನನ-ಮರಣದ ನೋಂದಣಿ ಪ್ರಕ್ರಿಯೆ
- ಇಂದು ರಾಷ್ಟ್ರೀಯ ವೈದ್ಯರ ದಿನ; ಗಣ್ಯರಿಂದ ವೈದ್ಯರ ಸೇವೆಗೆ ಶ್ಲಾಘನೆ

<><*<><>*><>

ಸಾಮಾಜಿಕ ಮಾಧ್ಯಮಗಳ ಹರಡುವ ಸುಳ್ಳು ಸುದ್ದಿಗಳು ಸಮಾಜಕ್ಕೆ ಅಪಾಯಕಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಪ್ರೆಸ್ ಕ್ಲಬ್ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ವಾರ್ತಾ ಮತ್ತು ಪ್ರಸಾರ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸುಳ್ಳು ಸುದ್ದಿಗಳ ಬಗ್ಗೆ ಇಡೀ ಸಮಾಜ ಬಹಳ ಎಚ್ಚರದಿಂದ ಇರಬೇಕು ಎಂದು ತಿಳಿಸಿದ ಅವರು, ಇಂತಹ ಸುದ್ದಿಗಳ ಮೇಲೆ ತೀವ್ರ ನಿಗಾ ಇಡಲು ಪ್ರತಿ ಜಿಲ್ಲೆಗಳಲ್ಲಿ ವಿಶೇಷ ಘಟಕ ಸ್ಥಾಪಿಸಲಾಗಿದೆ ಎಂದು ಹೇಳಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಸುಳ್ಳು ಸುದ್ದಿಗಳ ಬಗ್ಗೆ ಪತ್ರಿಕೆ, ಮಾಧ್ಯಮ ಸಂಘಟನೆಗಳು ಗಂಭೀರವಾಗಿ ಯೋಚಿಸಬೇಕು ಎಂದು ಅವರು ಸಲಹೆ ನಿಡಿದರು.

<><*<><>*><>

ಹೊಸ ಮೂರು ಅಪರಾಧ ಕಾಯ್ದೆಗಳು ಇಂದಿನಿಂದ ಜಾರಿಗೆ ಬರಲಿದೆ. ಭಾರತೀಯ ನ್ಯಾಯ ಸಂಹಿತಾ-೨೦೨೩, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ-೨೦೨೩, ಭಾರತೀಯ ಸಾಕ್ಷ್ಯ ಅಧಿನಿಯಮ-೨೦೨೩ ಇಂದಿನಿಂದ ಜಾರಿಗೆ ಬರಲಿದೆ. ಹೊಸ ಕ್ರಿಮಿನಲ್ ಕಾನೂನುಗಳು ಭಾರತೀಯ ನಾಗರಿಕರನ್ನು ಸಬಲರನ್ನಾಗಿಸಲು ಮಹತ್ವದ ಹೆಜ್ಜೆಯಾಗಿದೆ. ಹೊಸ ಕ್ರಿಮಿನಲ್ ಕಾನೂನುಗಳಡಿ ಘಟನೆಗಳನ್ನು ಆನ್‌ಲೈನ್‌ನಲ್ಲಿ ವರದಿ ಮಾಡುವುದು, ಯಾವುದೇ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸುವುದು ಮತ್ತು ಸಂತ್ರಸ್ತರು ಎಫ್‌ಐಆರ್‌ನ ಉಚಿತ ನಕಲನ್ನು ಪಡೆಯಬಹುದಾಗಿದೆ. ಬಂಧನದ ಸಂದರ್ಭದಲ್ಲಿ, ವ್ಯಕ್ತಿಯು ತನ್ನ ಆಯ್ಕೆಯ ವ್ಯಕ್ತಿಗೆ ಅವರ ಬಂಧನದ ಬಗ್ಗೆ ತಿಳಿಸುವ ಹಕ್ಕನ್ನು ಹೊಂದಿರುತ್ತಾನೆ. ಹೊಸ ಕಾನೂನುಗಳು ಮಹಿಳೆಯರು ಮತ್ತು ಮಕ್ಕಳ ವಿರುದ್ಧದ ಅಪರಾಧಗಳ ತನಿಖೆಗೆ ಆದ್ಯತೆ ನೀಡಿವೆ, ಮಾಹಿತಿಯನ್ನು ದಾಖಲಿಸಿದ ಎರಡು ತಿಂಗಳೊಳಗೆ ತನಿಖೆಯನ್ನು ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಿದೆ.

ಹೊಸ ಕ್ರಿಮಿನಲ್ ಕಾನೂನುಗಳಲ್ಲಿ, ವಿಧಿ ವಿಜ್ಞಾನ ತಜ್ಞರು ಗಂಭೀರ ಅಪರಾಧಗಳಲ್ಲಿ ಅಪರಾಧದ

ಸ್ಥಳಗಳಿಗೆ ಭೇಟಿ ನೀಡುವುದು ಮತ್ತು ಸಾಕ್ಷ್ಯವನ್ನು ಸಂಗ್ರಹಿಸುವುದು ಕಡ್ಡಾಯವಾಗಿದೆ. ಹೊಸ ಕ್ರಿಮಿನಲ್ ಕಾನೂನುಗಳನ್ನು ಜಾರಿಗೆ ತರಲು, ವ್ಯವಸ್ಥೆಯಲ್ಲಿ ಸುಗಮ ಪರಿವರ್ತನೆಗಾಗಿ ಪೊಲೀಸ್ ಮತ್ತು ತನಿಖಾ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದೆ. ದೂರದರ್ಶನ ಮತ್ತು ಆಕಾಶವಾಣಿಯ ಸುದ್ದಿ ಬುಲೆಟಿನ್‌ಗಳು, ಕಾರ್ಯಕ್ರಮಗಳು, ಚರ್ಚೆಗಳು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ ಹೊಸ ಕ್ರಿಮಿನಲ್ ಕಾನೂನುಗಳ ಮೇಲೆ ಚರ್ಚೆಗಳು ಮತ್ತು ಆಳವಾದ ವಿಶ್ಲೇಷಣೆ ಪ್ರಸಾರ ಮಾಡಲಾಗುತ್ತಿದೆ. ಸಾರ್ವಜನಿಕ ಜಾಗೃತಿ, ಸಂವಾದ ಕಾರ್ಯಕ್ರಮಗಳು, ಮಾಹಿತಿ ವೆಬ್‌ಸೈಟ್‌ಗಳು, ಸಚಿವರ ಮಟ್ಟದ ವೆಬಿನಾರ್‌ಗಳನ್ನು ಸಹ ನಡೆಸಲಾಗಿದೆ. ಹೆಚ್ಚುವರಿಯಾಗಿ, ಶಾಲೆ ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೋರ್ಸ್ ಮಾಡ್ಯೂಲ್‌ಗಳನ್ನು ಕಡ್ಡಾಯವಾಗಿ ಸೇರಿಸುವುದು ಸೇರಿದಂತೆ ಹಲವು ಉಪ ಕ್ರಮಗಳನ್ನು ಕೈಗೊಳ್ಳಲಾಗಿದೆ.

<><*<><>*><>

ರಾಜ್ಯದಲ್ಲಿ ಇಂದಿನಿಂದ ಬರುವ ದೂರುಗಳೆಲ್ಲಾ ಹೊಸ ಕಾನೂನುಗಳಡಿ ದಾಖಲಾಗಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಹೊಸ ಕಾನೂನು ಸಂಬಂಧ ಪೊಲೀಸ್ ಪೇದೆಗಳಿಂದ ಹಿಡಿದು ಅಧಿಕಾರಿಗಳವರೆಗೂ ತರಬೇತಿ ನೀಡಲಾಗಿದೆ. ಇದಕ್ಕಾಗಿ ಪೊಲೀಸರಿಗೆ ಆಪ್ ಸಿದ್ದಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಹೊಸ ಕಾನೂನಿನ ಪರಿಣಾಮ ಏನು ಎಂದು ಈಗಲೇ ತಿಳಿಸುವುದು ಅಸಾಧ್ಯ ಎಂದು ಹೇಳಿದರು. ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪತಿ-ಪತ್ನಿ ವರ್ಗಾವಣೆ ಬಗ್ಗೆ ಶೀಘ್ರವೇ ಹೊಸ ನಿಯಮಗಳನ್ನು ಜಾರಿಗೆ ತರಲಾಗುವುದು ಎಂದು ತಿಳಿಸಿದರು.

<><*<><>*><>

ಇಂದಿನಿಂದ ಗ್ರಾಮ ಪಂಚಾಯಿತಿಗಳಲ್ಲಿಯೇ ಜನನ ಮರಣದ ನೋಂದಣಿ ಮಾಡಿಸಬಹುದಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಜನನ ಮರಣ ನೋಂದಣಿ ೩೦ ದಿನದೊಳಗೆ ಪೂರ್ಣಗೊಳಿಸಲು ಅನುಕೂಲವಾಗುವಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ಸರ್ಕಾರ ನೇಮಕ ಮಾಡಿದೆ. ಗ್ರಾಮಪಂಚಾಯಿತಿ ಕಾರ್ಯದರ್ಶಿಗಳು ಜನನ ಮರಣ, ಉಪ ನೋಂದಣಾಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ೨೧ ದಿನದೊಳಗೆ ನೋದಾಯಿಸಿದರೆ ಪ್ರಮಾಣ ಪತ್ರವನ್ನು ಉಚಿತವಾಗಿ ವಿತರಿಸಲಾಗುತ್ತದೆ. ೨೧ ದಿನಗಳ ನಂತರ ೩೦ ದಿನಗಳೊಳಗೆ ನೋಂದಾಯಿಸಿದರೆ ಎರಡು ರೂಪಾಯಿ ಶುಲ್ಕ ವಿಧಿಸಲಾಗುವುದು ೩೦ ದಿನಗಳ ಬಳಿಕ ೧ ವರ್ಷದೊಳಗೆ ತಹಶೀಲ್ದಾರರ ಪತ್ರ ಲಗತ್ತಿನ ಜೊತೆಗೆ ೫ ರೂಪಾಯಿ ಶುಲ್ಕ ಪಾವತಿಸಬೇಕು. ಒಂದು ವರ್ಷದ ನಂತರವಾದಲ್ಲಿ ಮೊದಲನೇ ವರ್ಗ ದಂಡಾಧಿಕಾರಿ ಅಥವಾ ಮಹಾ ಪ್ರಾಂತ್ಯ ದಂಡಾಧಿಕಾರಿ ಆದೇಶ ಪತ್ರ ಲಗತ್ತಿಸಿ ೧೦ ರೂಪಾಯಿ ಶುಲ್ಕ ಪಾವತಿಸಬೇಕಿದೆ.

<><*<><>*><>

ಇಂದು ರಾಷ್ಟ್ರೀಯ ವೈದ್ಯರ ದಿನ. ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ವೈದ್ಯರ ಶ್ರಮ ಅನನ್ಯವಾಗಿದ್ದು, ವೈದ್ಯರ ಸೇವೆ ಶ್ಲಾಘನೀಯ ಎಂದು ತಿಳಿಸಿದ್ದಾರೆ. ತಾಯಿ ಜನ್ಮ ನೀಡಿದರೆ, ವೈದ್ಯರು ಪುನರ್ಜನ್ಮ ನೀಡುವರು. ಇದೇ ಕಾರಣಕ್ಕೆ ವೈದ್ಯವೃತ್ತಿಯನ್ನು ಇತರೆ ಎಲ್ಲಾ ವೃತ್ತಿಗಳಿಗಿಂತ ಅತ್ಯಂತ ಶ್ರೇಷ್ಠವೆಂದು ಭಾವಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ತನ್ನ ಬಳಿ ಬರುವ ವ್ಯಕ್ತಿಯ ವಿಚಾರದಲ್ಲಿ ಯಾವುದೇ ಭೇದ ಭಾವವಿಲ್ಲದೆ ಪ್ರತಿಯೊಬ್ಬರನ್ನೂ ಸಮಾನ ಆರೈಕೆ ಮಾಡುವ, ರೋಗಿಯ ಪ್ರಾಣ ರಕ್ಷಣೆಗಾಗಿ ಹಗಲಿರುಳೆನ್ನದೆ ದುಡಿಯುತ್ತಿರುವ ನಾಡಿನ ಸಮಸ್ತ ವೈದ್ಯ ಸಮೂಹಕ್ಕೆ ರಾಷ್ಟ್ರೀಯ

ವೈದ್ಯರ ದಿನದ ಶುಭಾಶಯಗಳು. ವೈದ್ಯರ ಸೇವೆ - ಸಮರ್ಪಣಾಭಾವವನ್ನು ಈ ದಿನ ನಾವೆಲ್ಲರೂ ಅತ್ಯಂತ ಗೌರವದಿಂದ ಸ್ಮರಿಸೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

**<><*<><>*><>**

ಭದ್ರಾ ಮೇಲ್ದಂಡೆ ಯೋಜನೆಯಡಿ ತುಂಗಾ ಜಲಾಶಯದಿಂದ ಭದ್ರಾ ಜಲಾಶಯಕ್ಕೆ ನೀರು ಪೂರೈಕೆ ಕಾಮಗಾರಿ ಕಾಲಮಿತಿಯೊಳಗೆ ಮುಗಿಯಬೇಕೆಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ವಿಶ್ವೇಶ್ವರಯ್ಯ ಜಲನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ದಾವಣಗೆರೆಯಲ್ಲಿ ವಿಶ್ವೇಶ್ವರಯ್ಯ ಜಲ ನಿಗಮದ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತ್ವರಿತಗತಿಯಲ್ಲಿ ಕಾಮಗಾರಿ ಮುಗಿಸಿ, ಜಗಳೂರು ತಾಲೂಕಿನ ರೈತರಿಗೆ ಭದ್ರಾ ಮೇಲ್ದಂಡೆ ಯೋಜನೆ ಅಡಿ ಸಮರ್ಪಕ ನೀರು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

**<><*<><>*><>**

ಭಾರತದ ಸ್ವಾತಂತ್ರ್ಯ ಚಳವಳಿಗೆ, ಹೋರಾಟಗಳಿಗೆ ಧಾರವಾಡ ಜಿಲ್ಲೆಯ ಕೊಡುಗೆ ಅಪಾರವಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಈ ಬಾರಿಯ ಸ್ವಾತಂತ್ರ್ಯೋತ್ಸವವನ್ನು ಇನ್ನಷ್ಟು ಅರ್ಥಪೂರ್ಣವಾಗಿ ಆಚರಿಸಲು ರಾಷ್ಟ್ರದ ಸ್ವಾತಂತ್ರ್ಯ ಚಳವಳಿಗೆ ಧಾರವಾಡ ಜಿಲ್ಲೆಯ ಕೊಡುಗೆ ಕುರಿತು ಒಂದು ದಿನದ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದು ಹೇಳಿದ್ದಾರೆ. ಧಾರವಾಡ ನಗರದ ಜಕಣಿಭಾವಿ ಬಳಿ ಇರುವ ಖಿಲಾಫತ್ ಹೊರಾಟಗಾರರ ಗೌರವಾರ್ಥ ಸ್ಥಾಪಿಸಿರುವ ಹುತಾತ್ಮರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ಇಂದಿನ ಯುವ ಸಮೂಹ ಮತ್ತು ಮಕ್ಕಳಿಗೆ ನಮ್ಮ ಸ್ವಾತಂತ್ರ್ಯ ಹೋರಾಟಗಾರರು, ರಾಷ್ಟ್ರ ನಾಯಕರ ಬಗ್ಗೆ ಅರಿವು ಮೂಡಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

**<><*<><>*><>**

ರೈತರು ತಮ್ಮ ಜಮೀನುಗಳಲ್ಲಿ ಬಿತ್ತನೆ ಮಾಡಿದ ಬೆಳೆಗಳಿಗೆ ವಿಮಾ ಕಂತು ಪಾವತಿಸುವ ಮೂಲಕ ಪ್ರಕೃತಿ ವಿಕೋಪದಿಂದಾಗುವ ಆರ್ಥಿಕ ಸಂಕಷ್ಟದಿಂದ ಪಾರಾಗಬೇಕೆಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಕೃಷಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರೈತರು ಬೆಳೆಯುವಂತಹ ವಿವಿಧ ಬೆಳೆಗಳಿಗೆ ಪ್ರತ್ಯೇಕವಾಗಿ ವಿಮಾ ಕಂತುಗಳನ್ನು ನಿಗದಿಪಡಿಸಲಾಗಿದೆ. ರೈತರು ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ತಾವು ಬೆಳೆದ ಬೆಳೆಗೆ ವಿಮಾ ಕಂತು ಪಾವತಿಸುವಂತೆ ಸೂಚಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಮಳೆಗಾಲ ಆರಂಭವಾಗಿರುವ ಹಿನ್ನೆಲೆ ಡೆಂಘಿ ಜ್ವರ ಹಾಗೂ ಚಿಕುನ್ ಗುನ್ಯಾ ಪ್ರಕರಣಗಳು ಹೆಚ್ಚಾಗುತ್ತಿದೆ ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ವಿಜಯಕುಮಾರ್ ತಿಳಿಸಿದ್ದಾರೆ. ಕೋಲಾರ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಮಾತನಾಡಿದ ಅವರು ಗ್ರಾಮೀಣ ಪ್ರದೇಶಗಳಲ್ಲಿ ತೆಂಗು, ಮಾವು ತೋಟಗಳಲ್ಲಿ, ನಗರ ಪ್ರದೇಶಗಳಲ್ಲಿನ ಮನೆಗಳ ಆವರಣಗಳಲ್ಲಿರುವ ನೀರು ನಿಲ್ಲುವ ಹೂವಿನ ಕುಂಡ, ಹಳೆ ಟೈರು, ತೆಂಗಿನ ಚಿಪ್ಪುಗಳು, ಡೆಂಘಿ ಜ್ವರಕ್ಕೆ ಕಾರಣವಾಗಬಹುದು ಎಂದು ತಿಳಿಸಿದರು.

**<><*<><>*><>**

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಎನ್‌ಟಿಎ ಇಂದು ೧೫೬೩ ಅಭ್ಯರ್ಥಿಗಳ ಪರಿಷ್ಕೃತ ಫಲಿತಾಂಶವನ್ನು ಮತ್ತು ಮರು-ಪರೀಕ್ಷೆಯ ನಂತರ ನೀಟ್ ಪರೀಕ್ಷೆಯ ಎಲ್ಲಾ ಅಭ್ಯರ್ಥಿಗಳ ಶ್ರೇಣಿಯನ್ನು ಪ್ರಕಟಿಸಿದೆ. ಎಲ್ಲಾ ಅಭ್ಯರ್ಥಿಗಳ ಪರಿಷ್ಕೃತ ಸ್ಕೋರ್ ಕಾರ್ಡ್‌ಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದೆ ಎಂದು ಎನ್‌ಟಿಎ ಪ್ರಕಟಣೆಯಲ್ಲಿ ತಿಳಿಸಿದೆ. ಅಭ್ಯರ್ಥಿಗಳು ವೆಬ್‌ಸೈಟ್‌ಗೆ ಲಾಗಿನ್ ಮಾಡಬಹುದು ಮತ್ತು ತಮ್ಮ ಪರಿಷ್ಕೃತ ಸ್ಕೋರ್ ಕಾರ್ಡ್‌ಗಳನ್ನು ವೆಬ್‌ಸೈಟ್‌ನಲ್ಲಿ ನೋಡಬಹುದಾಗಿದೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಕೋಲಾರ ವಿಧಾನಸಭಾ ಕ್ಷೇತ್ರದ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಅಧ್ಯಕ್ಷರನ್ನಾಗಿ ಕೊತ್ತೂರು ಜಿ. ಮಂಜುನಾಥ್ ಅವರನ್ನು ಸರ್ಕಾರ ನೇಮಿಸಿದೆ. ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯ ಸದಸ್ಯರಾಗಿ ಕ್ಯಾಲನೂರು ಗ್ರಾಮದ ಷೇಕ್ ಮಹಮದ್, ಕಾರಂಜಿಕಟ್ಟೆಯ ಖಾದ್ರಿಪುರ ಕೆ.ಬಾಬು, ತಾಲೂಕು ಪಂಚಾಯಿತಿ ಮಾಜಿ ಸದಸ್ಯೆ ಛತ್ರ ಕೋಡಹಳ್ಳಿ ಸವಿತಾ ಮಂಜುನಾಥ್ ಹಾಗೂ ತಹಶೀಲ್ದಾರರನ್ನು ಕಾರ್ಯದರ್ಶಿಯಾಗಿ ನೇಮಿಸಲಾಗಿದೆ.

೨. ಚಿಕ್ಕಮಗಳೂರು ಜಿಲ್ಲೆಯಲ್ಲಿ ವಾಹನಗಳ ವೇಗದ ಮೇಲೆ ನಿಯಂತ್ರಣ ಮಾಡಲು ಟ್ರಾಫಿಕ್ ಸಿಬ್ಬಂದಿಗೆ ೪ ಅತ್ಯಾಧುನಿಕ ಸ್ಪೀಡ್ ರೆಡಾರ್ ಗನ್ ಗಳನ್ನು ವಿತರಣೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ತಿಳಿಸಿದ್ದಾರೆ.

**<><*<><>*><>**

ಚೆನ್ನೈನ ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ಮಹಿಳಾ ತಂಡ ನಡುವಿನ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮೇಲುಗೈ ಸಾಧಿಸಿದೆ. ನಾಲ್ಕನೇ ದಿನದಾಟದ ಚಹಾ ವಿರಾಮದ ವೇಳೆಗೆ ದಕ್ಷಿಣ ಆಫ್ರಿಕಾ ತಂಡ ೮ ವಿಕೆಟ್ ನಷ್ಟಕ್ಕೆ ೩೩೬ ರನ್ ಗಳಿಸಿದೆ. ದಕ್ಷಿಣ ಆಫ್ರಿಕಾ ತಂಡ ೧ ರನ್ ಹಿನ್ನಡೆಯಲ್ಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**